**Akashvani : Bangalore**
**Regional Bulletin In Kannada**
**13.09.2025 / 2.30pm**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**13.09.2025 / 2.30pm**
**<><*<><>*><>**

<u>ಮುಖ್ಯಾಂಶಗಳು</u>

೧. ದಸರಾ ಸಾರ್ವತ್ರಿಕ ಹಬ್ಬ; ಉದ್ಘಾಟಕರ ವಿಚಾರ ನ್ಯಾಯಾಲಯದಲ್ಲಿ ಇತ್ಯರ್ಥವಾಗಲಿ - ಮುಖ್ಯಮಂತ್ರಿ

೨. ಒಂದೇ ಮಗು ಇದ್ದರೂ ಸರ್ಕಾರಿ ಶಾಲೆ ಮುಚ್ಚದೇ ಇರಲು ಸರ್ಕಾರ ನಿರ್ಧಾರ

೩. ಹಾಸನ ಅಪಘಾತ; ಮೃತರ ಕುಟುಂಬಕ್ಕೆ ಕೇಂದ್ರದಿಂದ ೨ ಲಕ್ಷ, ರಾಜ್ಯದಿಂದ ೫ ಲಕ್ಷ ರೂಪಾಯಿ ಪರಿಹಾರ ಘೋಷಣೆ

೪. ಗಗನಚುಕ್ಕಿಯಲ್ಲಿ ಜಲಪಾತೋತ್ಸವ; ಮುಖ್ಯಮಂತ್ರಿ ಇಂದು ಉದ್ಘಾಟನೆ

**><><><><><><**

ದಸರಾ ಒಂದು ಧರ್ಮಕ್ಕೆ ಸೇರಿದ ಕಾರ್ಯಕ್ರಮವಲ್ಲ. ಸಾಂಸ್ಕೃತಿಕವಾಗಿ ಎಲ್ಲ ಧರ್ಮದ ಜನರು ಇದರಲ್ಲಿ ಭಾಗವಹಿಸುತ್ತಾರೆ. ದಸರಾ ನಾಡಹಬ್ಬವಾಗಿದ್ದು, ಒಂದು ಧರ್ಮದವರು ಮಾತ್ರ ಭಾಗವಹಿಸಬೇಕು ಎಂದೇನೂ ಇಲ್ಲ. ಸಾರ್ವತ್ರಿಕ ಹಬ್ಬದಲ್ಲಿ ಎಲ್ಲ ಜಾತಿ ಮತ್ತು ಧರ್ಮದವರು ಭಾಗವಹಿಸಬಹುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಇಂದು ಮೈಸೂರಿನ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಸರಾ ಉದ್ಘಾಟಕರ ವಿಚಾರದಲ್ಲಿ ಉದ್ಘಾಟನೆಗೆ ಅವಕಾಶ ಕೊಡಬಾರದು ಎಂದು ಅರ್ಜಿ ಹಾಕಿರುವ ಕುರಿತು ನ್ಯಾಯಾಲಯದಲ್ಲೇ ವಿಷಯ ಇತ್ಯರ್ಥವಾಗಲಿ ಎಂದರು. ಗೋವಾ ಮಹದಾಯಿ ಯೋಜನೆಯನ್ನು ಹಾಗೂ ತಮಿಳುನಾಡು ಸರ್ಕಾರ ಮೇಕೆದಾಟು ಯೋಜನೆಯನ್ನು ವಿರೋಧಿಸುತ್ತಿರುವ ಬಗ್ಗೆ ಮಾತನಾಡಿದ ಮುಖ್ಯಮಂತ್ರಿಗಳು, ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು ಎಂದು ಹೇಳಿದರು.

**><><><><><><**

ಒಂದೇ ಮಗು ಇದ್ದರೂ ಕೂಡ ಯಾವುದೇ ಸರ್ಕಾರಿ ಶಾಲೆಯನ್ನು ಮುಚ್ಚದೇ ಇರಲು ರಾಜ್ಯ ಸರ್ಕಾರ ತೀರ್ಮಾನ ಕೈಗೊಂಡಿದೆ ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಆಯೋಜಿಸಿದ್ದ ಕರ್ನಾಟಕ ಅನುದಾನ ರಹಿತ ಪದವಿಪೂರ್ವ ಕಾಲೇಜು ಆಡಳಿತ ಮಂಡಳಿಗಳ ಸಂಘದ ಎರಡನೇ ರಾಜ್ಯ ಮಟ್ಟದ ಸಮಾವೇಶದಲ್ಲಿ ಅವರು ಮಾತನಾಡಿದರು. ರಾಜ್ಯದ ೧೩ ಸಾವಿರ ಶಾಲೆಗಳಲ್ಲಿ ಮಕ್ಕಳ ಹಾಜರಾತಿ ೨೫ಕ್ಕಿಂತಲೂ ಕಡಿಮೆ ಇದೆ. ಆದರೂ ಯಾವುದೇ ಶಾಲೆಯನ್ನು ಮುಚ್ಚದೇ ಇರಲು ತೀರ್ಮಾನ ಕೈಗೊಳ್ಳಲಾಗಿದೆ ಎಂದರು.ಕಳೆದ ಸರ್ಕಾರ ರಾಜ್ಯದಲ್ಲಿ ೩೦೮ ಕರ್ನಾಟಕ ಪಬ್ಲಿಕ್ ಶಾಲೆ ಆರಂಭಿಸಿತ್ತು. ಇದೀಗ ನಮ್ಮ ಸರ್ಕಾರ ೩ ಸಾವಿರದ ೫೦೦ ಕೋಟಿ ರೂಪಾಯಿ ಅನುದಾನದಲ್ಲಿ ೮೦೦ಕ್ಕೂ ಅಧಿಕ ಕೆಪಿಎಸ್ ಶಾಲೆಗಳನ್ನು ಆರಂಭಿಸಲು ಸಂಪುಟ ಸಭೆಯಲ್ಲಿ ನಿರ್ಧ ರಿಸಿದೆ ಎಂದು ಹೇಳಿದರು.

***ಧ್ವನಿ*** ಮಧು ಬಂಗಾರಪ್ಪ (೧೪ ಸೆಕೆಂಡ)

><><><><><><

ಹಾಸನ ಜಿಲ್ಲೆಯಲ್ಲಿ ಗಣಪತಿ ವಿಸರ್ಜನೆಗಾಗಿ ಹೊರಟಿದ್ದ ಮೆರವಣಿಗೆಗೆ, ಟ್ಯಾಂಕರ್ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮ, ಕನಿಷ್ಠ ಒಂಬತ್ತು ಜನರು ಸಾವನ್ನಪ್ಪಿದ್ದು, ೨೦ ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.ಮೊಸಳೆ ಹೊಸಳ್ಳಿಯಲ್ಲಿ ಗಣಪತಿ ವಿಸರ್ಜನೆ ಮೆರವಣಿಗೆಗೆ, ಟ್ಯಾಂಕರ್ ಲಾರಿಯೊಂದು ಅಜಾಗರೂಕತೆಯಿಂದ ನುಗ್ಗಿದಾಗ ಈ ದುರ್ಘಟನೆ ಸಂಭವಿಸಿದೆ. ಈ ಘಟನೆಯಲ್ಲಿ ಒಂಬತ್ತು ಮಂದಿ ಸಾವನ್ನಪ್ಪಿದ್ದು, ಚಾಲಕ ಸೇರಿದಂತೆ ಹಲವರು ಗಾಯಗೊಂಡಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಬೋರಲಿಂಗಯ್ಯ ಸುದ್ದಿಗಾರರಿಗೆ ಮಾಹಿತಿ ನೀಡಿದ್ದಾರೆ.ಅಪಘಾತದಲ್ಲಿ ಆರು ಮಂದಿ ಗ್ರಾಮಸ್ಥರು ಮತ್ತು ಮೂವರು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆ.ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಹಾಸನದಲ್ಲಿ ನಡೆದ ಅಪಘಾತ ಹೃದಯ ವಿದ್ರಾವಕವಾದುದು. ಈ ದುಃಖದ ಸಮಯದಲ್ಲಿ, ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದು, ಗಾಯಗೊಂಡವರು ಆದಷ್ಟು ಬೇಗ ಚೇತರಿಸಿಕೊಳ್ಳಲಿ ಎಂದು ಆಶಿಸಿದ್ದಾರೆ. ಪ್ರಧಾನಮಂತ್ರಿಯವರ ರಾಷ್ಟ್ರೀಯ ಪರಿಹಾರ ನಿಧಿಯಿಂದ ಪ್ರತಿಯೊಬ್ಬ ಮೃತರ ಹತ್ತಿರದ ಸಂಬಂಧಿಕರಿಗೆ ೨ ಲಕ್ಷ ರೂಪಾಯಿ ಮತ್ತು ಗಾಯಾಳುಗಳಿಗೆ ೫೦ ಸಾವಿರ ರೂಪಾಯಿ ಪರಿಹಾರ ನೀಡಲಾಗುವುದು ಎಂದು ತಿಳಿಸಿದ್ದಾರೆ. ಕರ್ನಾಟಕದ ಮುಖ್ಯಮಂತ್ರಿ

ಸಿದ್ದರಾಮಯ್ಯ ಸಾವಿನ ಬಗ್ಗೆ ದುಃಖ ವ್ಯಕ್ತಪಡಿಸಿದ್ದು, ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಮೃತರ ಕುಟುಂಬಸ್ಥರಿಗೆ ತಲಾ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸರ್ಕಾರದ ವತಿಯಿಂದ ಮೃತರ ಕುಟುಂಬಗಳಿಗೆ ತಲಾ ಐದು ಲಕ್ಷ ರೂಪಾಯಿ ಪರಿಹಾರ ನೀಡಲಾಗಿದೆ, ಅಲ್ಲದೆ ಗಾಯಾಳುಗಳ ಚಿಕಿತ್ಸಾ ವೆಚ್ಚವನ್ನು ಸರ್ಕಾರ ಬರಿಸಲು ನಿರ್ಧರಿಸಿದೆ. ಇದರ ಜೊತೆಗೆ ಸ್ಥಳೀಯರು ಪರಿಹಾರದ ಮೊತ್ತವನ್ನು ಮಾನವೀಯ ನೆಲೆಯಲ್ಲಿ ಹೆಚ್ಚಿಸಬೇಕು ಎಂಬ ಬೇಡಿಕೆ ಇಟ್ಟಿದ್ದಾರೆ ಇದನ್ನು ಸರ್ಕಾರದ ಗಮನಕ್ಕೆ ತಂದು ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಇದಲ್ಲದೆ ಘಟನೆಯಲ್ಲಿ ಭದ್ರತಾ ವೈಫಲ್ಯ ಇದೆಯೇ ಎಂಬುದರ ಬಗ್ಗೆಯೂ ಪರಿಶೀಲನೆ ನಡೆಸಲಾಗುವುದು ಎಂದರು.

*** ಧ್ವನಿ ***ಕೃಷ್ಣ ಬೈರೇಗೌಡ (೩೭ ಸೆಕೆಂಡ)

ಮಾಜಿ ಸಚಿವ ಎಚ್.ಡಿ. ರೇವಣ್ಣ, ಸಂಸದ ಶ್ರೇಯಸ್ ಪಟೇಲ್, ಶಾಸಕರಾದ ಸೂರಜ್ ರೇವಣ್ಣ, ಸ್ವರೂಪ್ ಪ್ರಕಾಶ್, ಸಿ.ಟಿ. ರವಿ ಸೇರಿದಂತೆ ಹಲವು ಗಣ್ಯರು ಘಟನಾ ಸ್ಥಳಕ್ಕೆ ಭೇಟಿ ನೀಡಿ, ಸಂತ್ರಸ್ತ ಕುಟುಂಬದವರಿಗೆ ಸಾಂತ್ವನ ಹೇಳಿದ್ದಾರೆ.

><><><><><><

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಗಗನಚುಕ್ಕಿ ಜಲಪಾತೋತ್ಸವವನ್ನು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಈ ಉತ್ಸವವನ್ನು ಇಂದು ಮತ್ತು ನಾಳೆ ವಿಭಿನ್ನವಾಗಿ, ಪ್ಲಾಸ್ಟಿಕ್ ಮುಕ್ತಗೊಳಿಸಿ ಆಚರಿಸಲಾಗುವುದು ಎಂದು ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಪಿ.ಎಂ ನರೇಂದ್ರಸ್ವಾಮಿ ಹೇಳಿದ್ದಾರೆ. ಮಳವಳ್ಳಿಯ ಗಗನಚುಕ್ಕಿಯಲ್ಲಿ ಆಯೋಜಿಸಿರುವ ಗಗನಚುಕ್ಕಿ ಜಲಪಾತೋತ್ಸವ ವೇದಿಕೆಯ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಯಿಂದ ಒಟ್ಟು ೨ ಕೋಟಿ ೫ ಲಕ್ಷ ರೂಪಾಯಿ ಅನುದಾನದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ ಎಂದರು.

><><><><><><

ಮಕ್ಕಳು, ಗರ್ಭಿಣಿಯರು, ಬಾಣಂತಿಯರು ಹಾಗೂ ಕಿಶೋರಿಯರು ಅಪೌಷ್ಠಿಕತೆ, ರಕ್ತಹಿನತೆಯಿಂದ ಬಳಲುತ್ತಿದ್ದು, ಅವರಲ್ಲಿ ಪೌಷ್ಠಿಕತೆ ಹೆಚ್ಚಿಸಿ ಸದೃಢರನ್ನಾಗಿ ಮಾಡಲು ಪೋಷಣ್ ಮಾಸಾಚರಣೆ ಆಯೋಜಿಸಲಾಗುತ್ತಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ. ಕಾರವಾರದಲ್ಲಿ 'ಪೋಷಣ್ ಮಾಸಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದ ಅವರು, ಅಂಗನವಾಡಿ ಕಾರ್ಯಕರ್ತರು, ಆರೋಗ್ಯ ಸಿಬ್ಬಂದಿ ಮತ್ತು ಸಮುದಾಯ ಸಂಘಟನೆಗಳು ಪೌಷ್ಟಿಕ ಆಹಾರ, ಆರೋಗ್ಯ ತಪಾಸಣೆ, ಸೀಮಂತ ಹಾಗೂ ಅನ್ನಪ್ರಾಶನ ಕಾರ್ಯಕ್ರಮಗಳು ಮತ್ತು ಪೌಷ್ಟಿಕಾಂಶದ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಗಳನ್ನು ಮಾಡಲಿದ್ದು, ಸಾರ್ವಜನಿಕರು ಸಹಕರಿಸುವಂತೆ ತಿಳಿಸಿದರು. ಇದೇ ಸಂದರ್ಭದಲ್ಲಿ ತಾಯಿ ಹೆಸರಿನಲ್ಲಿ ಗಿಡ ನೆಡುವ ಕಾರ್ಯಕ್ರಮ ನಡೆಯಿತು ಹಾಗು ಪೋಷಣ್ ಮಾಸಾಚರಣೆಯ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಯಿತು.

><><><><><><

ಯಾಂತ್ರೀಕೃತ ವಿಧಾನದ ಮೂಲಕ ಭತ್ತದ ನಾಟಿಯನ್ನು ಮಹಿಳೆಯರು ಕೂಡ ಮಾಡಲು ಸಾಧ್ಯ ಎಂದು ಮಂಡ್ಯ ಜಿಲ್ಲಾ ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ನಂದಿನಿ ಕೆ.ಆರ್. ಹೇಳಿದ್ದಾರೆ .ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ವತಿಯಿಂದ ಹೊಳಲು ಗ್ರಾಮದ ದಕ್ಷ ಯಂತ್ರ ನಾಟಿ ಸಸಿಮಡಿ ತಯಾರಿಕಾ ಘಟಕದಲ್ಲಿ ಏರ್ಪಡಿಸಲಾಗಿದ್ದ ಯಾಂತ್ರೀಕೃತ ಭತ್ತದ ನಾಟಿ ಪ್ರಾತ್ಯಕ್ಷಿಕೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು ಅವರು, ಯಾಂತ್ರೀಕೃತ ವಿಧಾನದ ಮೂಲಕ ಮಹಿಳೆಯರು ಕೂಡ ಭತ್ತ ನಾಟಿ ಮಾಡಬಹುದು ಎಂಬ ವಿಶ್ವಾಸ ತುಂಬಲು ಸ್ವತಃ ಅವರೇ ನಾಟಿ ಪ್ರಕ್ರಿಯೆಯಲ್ಲಿ ತೊಡಗಿರುವುದಾಗಿ ತಿಳಿಸಿದರು.

><><><><><><

ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ ಧ್ಯೇಯದೊಂದಿಗೆ, ೩ನೇ ರಾಷ್ಟ್ರೀಯ ಲೋಕ ಅದಾಲತ್ ರಾಜ್ಯಾದ್ಯಂತ ನಡೆಯುತ್ತಿದೆ. ನ್ಯಾಯಾಲಯಗಳಲ್ಲಿ ಬಾಕಿ ಇರುವ, ರಾಜಿ ಸಾಧ್ಯತೆಯ ಪ್ರಕರಣಗಳನ್ನು, ಕಕ್ಷಿದಾರರ ಸಮಕ್ಷಮ ಇತ್ಯರ್ಥಪಡಿಸಲು ಜನತಾ ನ್ಯಾಯಾಲಯಗಳಲ್ಲಿ ಲೋಕ ಅದಾಲತ್ ನಡೆಯುತ್ತಿದೆ. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು

ಸೇವೆಗಳ ಪ್ರಾಧಿಕಾರದಿಂದ ಇಂದು ಅಖಂಡ ಬಳ್ಳಾರಿ ಜಿಲ್ಲೆಯ ೩೧ ನ್ಯಾಯಾಲಯಗಳಲ್ಲಿ ಲೋಕ್ ಅದಾಲತ್ ನಡೆಯಿತು. ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಜಿಲ್ಲಾ ನ್ಯಾಯಾಧೀಶರಾದ ಕೆ.ಜಿ.ಶಾಂತಿ ಅವರ ನೇತೃತ್ವದಲ್ಲಿ ವಿವಿಧ ನ್ಯಾಯಾಧೀಶರು. ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಚೌನ್ಸ್ ಪ್ರಕರಣಗಳು ಸೇರಿದಂತೆ ರಾಜಿಯಾಗಬಹುದಾದ ಪ್ರಕರಣಗಳ ವಿಚಾರಣೆ ನಡೆಸಿ ತೀರ್ಪು ನೀಡಲಿದ್ದಾರೆ.

><><><><><><

ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆಯಡಿ ಕಿರು ಆಹಾರ ಸಂಸ್ಕರಣೆ ಅಥವಾ ಮೌಲ್ಯವರ್ಧನೆ ಘಟಕಸ್ಥಾಪನೆಗೆ ಶೇಕಡ ೫೦ರ ಸಹಾಯಧನದಲ್ಲಿ ಗರಿಷ್ಟ ರೂಪಾಯಿ ೧೫ ಲಕ್ಷದವರೆಗೆ ಬ್ಯಾಂಕ್ ಸಾಲದ ಮುಖಾಂತರ ಸಹಾಯಧನದ ಅವಕಾಶವಿದ್ದು, ಈ ಯೋಜನೆಯ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಇದೇ ೧೬ರಂದು ಕಾರವಾರದ ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಆಯೋಜಿಸಲಾಗಿದೆ.

><><><><><><

ಕೆನರಾ ಬ್ಯಾಂಕ್ ವತಿಯಿಂದ ಗ್ರಾಮ ಪಂಚಾಯಿತಿ ಸಹಯೋಗದೊಂದಿಗೆ, ಆರ್ಥಿಕ ಸೇರ್ಪಡೆ ಯೋಜನೆಗಳ ಅಭಿಯಾನವನ್ನು ಉತ್ತರಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಬೆಳಂಬಾರ್ ಗ್ರಾಮ ಪಂಚಾಯತಿಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಕೆನರಾ ಬ್ಯಾಂಕ್ ಪ್ರಧಾನ ವ್ಯವಸ್ಥಾಪಕ ಎಚ್.ಕೆ. ಗಂಗಾಧರ ಕಾರ್ಯಕ್ರಮ ಉದ್ಘಾಟಿಸಿ, ಬ್ಯಾಂಕ್‌ಗಳಲ್ಲಿ ದೊರೆಯುವ ಸೌಲಭ್ಯಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಅಭಿಯಾನದ ಮುಖ್ಯ ಉದ್ದೇಶ. ಬ್ಯಾಂಕ್‌ಗಳಲ್ಲಿ ಕೈಗೆಟುಕುವ ದರದಲ್ಲಿ ವಿಮೆ ಸೌಲಭ್ಯಗಳಿವೆ. ಅದೇ ರೀತಿ ಅನೇಕ ಸಾಲ ಸವಲತ್ತುಗಳು ಸಹ ಬ್ಯಾಂಕ್‌ಗಳಲ್ಲಿ ದೊರೆಯುತ್ತಿದ್ದು, ಇವುಗಳನ್ನು ಗ್ರಾಮೀಣ ಭಾಗದ ಜನತೆ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

><><><><><><

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಶು ಪಾಲನಾ ಇಲಾಖೆ ವತಿಯಿಂದ ದೇವನಹಳ್ಳಿ ತಾಲೂಕಿನ ವಿಶ್ವನಾಥಪುರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ರೇಬೀಸ್

ಜಾಗೃತಿ ಕಾರ್ಯಕ್ರಮದ ಅಂಗವಾಗಿ ರೇಬೀಸ್ ಜಾಗೃತಿ ಕಿರು ನಾಟಕ ಪ್ರದರ್ಶನ ನಡೆಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ದೇವನಹಳ್ಳಿ ಪಶು ಪಾಲನಾ ಇಲಾಖೆಯ ಮುಖ್ಯ ಪಶುವೈದ್ಯಾಧಿಕಾರಿ ಡಾ.ನಾರಾಯಣಸ್ವಾಮಿ ರೇಬಿಸ್ ರೋಗದಿಂದ ಪ್ರಾಣಕ್ಕೆ ಹಾನಿ ಉಂಟಾಗುತ್ತಿರುವ ಬಗ್ಗೆ ವರದಿಗಳಾಗುತ್ತಲೇ ಇರುತ್ತದೆ. ಇದರಿಂದ ಜಾಗೃತರಾಗಿರುವುದು ಅತ್ಯವಶ್ಯಕವಾಗಿರುತ್ತದೆ. ರೇಬಿಸ್ ರೋಗವು ಶೇಕಡ ೯೦ ರಷ್ಟು ನಾಯಿಗಳಿಂದಲೇ ಬರುವ ಸಾಧ್ಯತೆ ಹೆಚ್ಚಾಗಿದ್ದು, ಮುಂಜಾಗ್ರತಾ ಕ್ರಮವಾಗಿ ರೇಬಿಸ್ ನಿರೋಧಕ ಚುಚ್ಚುಮದ್ದು ಹಾಕಿಸುವುದು ಅವಶ್ಯಕವಾಗಿದೆ ಎಂದರು.

><><><><><><

ಸಮಾಜದಲ್ಲಿ ಉನ್ನತ ಸ್ಥಾನಮಾನವನ್ನು ಪಡೆಯಲು ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯ ಮುಖ್ಯ ಪಾತ್ರವಹಿಸುತ್ತವೆ ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಹೇಳಿದ್ದಾರೆ. ಯಾದಗಿರಿ ನಗರದ ಕೋಲಿವಾಡ ಸರ್ಕಾರಿ ಹಿರಿಯ ಪ್ರಾಥಮಿಕ ಮಾದರಿ ಶಾಲೆಗೆ ಸಿಎಸ್ಆರ್ ಅನುದಾನದಲ್ಲಿ ಐಡಿಬಿಐ ಬ್ಯಾಂಕ್ ವತಿಯಿಂದ ನೀಡಲಾದ ಶುದ್ಧ ಕುಡಿಯುವ ನೀರಿನ ಘಟಕವನ್ನು ಉದ್ಘಾಟಿಸಿಯರು ಮಾತನಾಡಿದರು.

><><><>END<><><><